# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ವಾರ್ಡ್ ಕಛೇರಿ ಸಭಾಂಗಣದಲ್ಲಿ ದಿನಾಂಕ: 07-11-2020 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ.ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ರಿವೋಬ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ)
4. ಶಾಂತಕುಮಾರ್ ಲೇಔಟ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ)
5. ಶ್ರೀಮತಿ ಇಂದಿರಾ ಅರುಣ್, ಸ್ಥಳೀಯರು,
6. ಶ್ರೀಮತಿ ರೋಜಿತಾ, ಸ್ಥಳೀಯರು,
7. ಶ್ರೀ ಎ.ಆರ್.ಸುರೇಶ್, ಸ್ಥಳೀಯರು,
8. ಶ್ರೀ ಬಿಜು ಚನಾಯತ್, ಸ್ಥಳೀಯರು,
9. ಶ್ರೀ ಮಣಿಶಂಕರ್, ಸದಸ್ಯರು ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು,
10. ಶ್ರೀ ತಿಪ್ಪೇಸ್ವಾಮಿ, ಸದಸ್ಯರು ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು,

**ಹಾಜರಿದ್ದ ಅಧಿಕಾರಿಗಳು**

1. ಶ್ರೀಮತಿ ಡಾ॥ ವಿನುತಾ, ವೈದ್ಯಾಧಿಕಾರಿಗಳು,
2. ಶ್ರೀ ಎನ್ ಮಹೇಂದ್ರ ಪ್ರಸಾದ್, ಸಹ ಕಂದಾಯ ಅಧಿಕಾರಿ, ಮಾರುತಿಸೇವಾನಗರ ಉಪ ವಿಭಾಗ
3. ಶ್ರೀ ಮಹೇಶ್‌ಕುಮಾರ್, ಕರ ವಸೂಲಿಗಾರ, ಮಾರುತಿಸೇವಾನಗರ
4. ಶ್ರೀ ನವೀನ್, ಸಹಾಯಕ ಇಂಜಿನಿಯರ್ (ಬೆಸ್ಕಾಂ ಇಲಾಖೆ)
5. ಶ್ರೀ ಹನುಮಂತ, ಸಹಾಯಕ ಇಂಜಿನಿಯರ್ (ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ)
6. ಶ್ರೀ ಬಿ ರಾಜು, ಎ.ಎಸ್.ಐ, ಪುಲಿಕೇಶಿನಗರ, (ಪೋಲೀಸ್ ಇಲಾಖೆ)
7. ಶ್ರೀ ಎಸ್.ಎಂ. ಮಾಲಿ, ಪೋಲೀಸ್ ಕಾನ್ಸ್‌ಟೇಬಲ್

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಪಿ.ಶಣ್ಮುಗಂ, ಸದಸ್ಯರು, ವಾರ್ಡ್ ಕಮಿಟಿ ಸದಸ್ಯರು,** ರವರು ಮಾತನಾಡುತ್ತಾ, ಮಾರುತಿಸೇವಾನಗರ ವಾರ್ಡಿನ ಲಾಜರ್ ರಸ್ತೆ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿರುವ ಚರಂಡಿ ಹಾಳಾಗಿದ್ದು, ಸದರಿ ಪ್ರದೇಶಗಳಲ್ಲಿ ಹಾಳಾಗಿರುವ ಚರಂಡಿಗಳನ್ನು ಕೂಡಲೇ ದುರಸ್ಥಿಪಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ ಕಾಮಗಾರಿ ಇಲಾಖೆಗೆ ತಿಳಿಸಿದರು.

2) **ಶ್ರೀ ಗಿರೀಶ್, ವಾರ್ಡ್ ಕಮಿಟಿ ಸದಸ್ಯರು,** ರವರು ಮಾತನಾಡುತ್ತಾ, ಪಾರ್ಕ್ ರಸ್ತೆ ಮತ್ತು ಜೀವನಹಳ್ಳಿ ಮುಖ್ಯರಸ್ತೆ, ರಸ್ತೆಗಳ ಅಕ್ಕಪಕ್ಕದಲ್ಲಿ ಬಿದ್ದಿರುವ ಶಿಲ್ಟ್‌ನ್ನು ಆಗಿಂದ್ದಾಗ್ಗೆ ತೆರವುಗೊಳಿಸಲು ಮತ್ತು ರಸ್ತೆ ನಿರ್ವಹಣೆಯನ್ನು ಸಮಂಜಸವಾಗಿ ನಿರ್ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ

ಸುರಿಯುತ್ತಿರುವ ಮಳೆಯಿಂದ ಶೇಖರಣೆಯಾಗುವ ಶಿಲ್ಟ್‌ನ್ನು ಆಗಿಂದ್ದಾಗ್ಗೆ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

3) **ಶ್ರೀ ನರಸಿಂಹ.ಕೆ, ವಾರ್ಡ್ ಕಮಿಟಿ ಸದಸ್ಯರು,** ರವರು ಮಾತನಾಡುತ್ತಾ, ಜೈ ಭಾರತ್‌ನಗರ ಮತ್ತು ಸುತ್ತಮುತ್ತಲಿನ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯದೇ ಇರುವುದರಿಂದ ರಾತ್ರಿ ಸಮಯದಲ್ಲಿ ರಸ್ತೆಯಲ್ಲಿ ಪಾದಾಚಾರಿಗಳು ಹಾಗೂ ಸಾರ್ವಜನಿಕರು ಓಡಾಡಲು ತುಂಬಾ ತೊಂದರೆಯುಂಟಾಗುತ್ತಿದ್ದು, ಈ ಬಗ್ಗೆ ಬೀದಿ ದೀಪ ನಿರ್ವಹಣೆ ರವರಿಗೆ ಮಾಹಿತಿ ನೀಡಿ, ಕೂಡಲೇ ಕ್ರಮವಹಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಜೈ ಭಾರತ್‌ನಗರ ಮತ್ತು ಸುತ್ತಮುತ್ತಲಿನ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಹಾಳಾಗಿರುವ ಬೀದಿ ದೀಪಗಳನ್ನು ಕೂಡಲೇ ದುರಸ್ತಿಗೊಳಿಸಿ, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

4) **ಶ್ರೀಮತಿ ಶ್ರೀದೇವಿ, ವಾರ್ಡ್ ಕಮಿಟಿ ಸದಸ್ಯರು,** ಇವರು ಮಾತನಾಡುತ್ತಾ ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸ ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಿರ್ವಹಣೆ ಮಾಡುತ್ತಿಲ್ಲವೆಂದು ಇದರಿಂದ ಸಾರ್ವಜನಿಕರು ಕಸವನ್ನು ಎಲ್ಲಂದರಲ್ಲಿ ಎಸೆದು ಹೋಗುತ್ತಿರುವುದಾಗಿ ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸ ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಹಾಗೂ ವಾರ್ಡಿನಲ್ಲಿ ಈ ಬಗ್ಗೆ ಮುಂದಿನ ದಿನಗಳಲ್ಲಿ ಯಾವುದೇ ದೂರುಗಳು ಬಾರದಂತೆ ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ, ಆರೋಗ್ಯ ನಿರೀಕ್ಷಕರಿಗೆ ತಿಳಿಸಿದರು.

5) **ಶ್ರೀ ಚಲಪತಿ, ವಾರ್ಡ್ ಕಮಿಟಿ ಸದಸ್ಯರು,** ಇವರು ಮಾತನಾಡುತ್ತಾ, ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ ಶಿಲ್ಟ್ ಅಂಡ್ ಟ್ರ್ಯಾಕ್ಟರ್ ಕಾಮಗಾರಿಯನ್ನು ಗುತ್ತಿಗೆದಾರರು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಈ ಬಗ್ಗೆ ಸಂಬಂಧಪಟ್ಟ ಗುತ್ತಿಗೆದಾರರು / ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಕಾಮಗಾರಿ ಇಲಾಖೆಯ ಅಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮ ವಹಿಸಲು, ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಶಿಲ್ಟ್‌ನ್ನು ಆಗಿಂದ್ದಾಗ್ಗೆ ತೆರವುಗೊಳಿಸಿ, ಸಾರ್ವಜನಿಕರಿಂದ ಯಾವುದೇ ದೂರುಗಳು ಬರದಂತೆ ಕ್ರಮ ವಹಿಸಲು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಮುಂದಿನ ವಾರ್ಡ್ ಸಮಿತಿ ಸಭೆಗೆ ಬೀದಿ ದೀಪಗಳ ನಿರ್ವಹಣೆ ರವರು ಕಡ್ಡಾಯವಾಗಿ ಹಾಜರಿರಲು ಕ್ರಮವಹಿಸಲು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು<br>ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ | ಅಧ್ಯಕ್ಷರು<br>(ನೋಡೆಲ್ ಅಧಿಕಾರಿಗಳು)<br>ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ |

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ.
6) ಕಛೇರಿ ಕಡತಕ್ಕೆ.